GOVERNMENT OF KARNATAKA

# STATE SCHOLARSHIP PORTAL



(home.aspx)

ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ 08025354757 ಅನ್ನು ಸ್ಥಗಿತಗೊಳಿಸಲಾಗಿದೆ. 1ನೇ ಮೇ 2021 ರಿಂದ ವಿದ್ಯಾರ್ಥಿಗಳಿಗೆ ಅರ್ಜಿ ಸಲ್ಲಿಕೆ ಪ್ರಕ್ರಿಯೆಯಲ್ಲಿ ಯಾವುದೇ ತಾಂತ್ರಿಕ ಸಮಸ್ಯೆ ಎದುರಾದಲ್ಲಿ ತಮಗೆ ಸಂಬಂಧಿಸಿದ ಇಲಾಖೆಯ ಸಹಾಯವಾಣಿಗೆ ಕರೆಮಾಡಬೇಕು. ಇಲ್ಲಿ ಕ್ಲಿಕ್ ಮಾಡಿ

ಹಿಂದುಳಿದ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ,25/07/2021

ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : 27/10/2021

ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 27/10/2021

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 27/10/2021

ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 03/05/2021

ತಾಂತ್ರಿಕ ಶಿಕ್ಷಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 27/10/2021

ವಿಕಲಚೇತನರ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 27/10/2021

NEW ಕಾಲೇಜು ಮಾಹಿತಿ ವ್ಯವಸ್ಥೆ (ಸಿ.ಐ.ಎಸ್) ಗೆ ಲಾಗಿನ್ ಮಾಡಲು ಇಲ್ಲಿ ಕ್ಲಿಕ್ ಮಾಡಿ (HTTPS://SSP.POSTMATRIC.KARNATAKA.GOV.IN/CIS)

ಮೆಟ್ರಿಕ್ ನಂತರ ವಿದ್ಯಾರ್ಥಿವೇತನ ಅರ್ಜಿಗಾಗಿ ಅಗತ್ಯವಿರುವ ಮಾಹಿತಿಗಳು/ದಾಖಲೆಗಳು:

ವಿದ್ಯಾರ್ಥಿಗಳ ಎಸ್.ಎ.ಟಿ.ಎಸ್ ಗುರುತಿನ ಸಂಖ್ಯೆ / ಕಾಲೇಜು ನೋಂದಣಿ ಸಂಖ್ಯೆ

ವಿದ್ಯಾರ್ಥಿ ಮತ್ತು ಪೋಷಕರ ಆಧಾರ್ ಸಂಖ್ಯೆ

ರಾಷ್ಟ್ರೀಯ ವಿದ್ಯಾರ್ಥಿವೇತನ ಪೋರ್ಟಲ್ ನ ದಾಖಲಾತಿ ಸಂಖ್ಯೆ ( ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಮಾತ್ರ ಅನ್ವಯ)

ಸೂಚನೆ: ಅಲ್ಪ ಸಂಖ್ಯಾತ ವಿದ್ಯಾರ್ಥಿಗಳು ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ ಅರ್ಜಿ ಸಲ್ಲಿಸುವ ಮೊದಲು ರಾಷ್ಟ್ರೀಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ ಅರ್ಜಿ ಸಲ್ಲಿಸುವುದು ಕಡ್ಡಾಯವಾಗಿರುತ್ತದೆ.

ರಾಷ್ಟ್ರೀಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ ಅರ್ಜಿ ಸಲ್ಲಿಸಲು ಇಲ್ಲಿ ಕ್ಲಿಕ್ ಮಾಡಿ **(https://scholarships.gov.in/)**

ವಿದ್ಯಾರ್ಥಿಯ ಮೊಬೈಲ್ ಸಂಖ್ಯೆ

ವಿದ್ಯಾರ್ಥಿಯ ಹೆಸರಿನಲ್ಲಿರುವ ಆರ್.ಡಿ ಯಿಂದ ಶುರುವಾಗುವ ಜಾತಿ / ಆದಾಯ / ಆರ್ಥಿಕವಾಗಿ ದುರ್ಬಲ ವಿಭಾಗದ (ಬ್ರಾಹ್ಮಣ ವರ್ಗದ ವಿದ್ಯಾರ್ಥಿಗಳಿಗೆ ಮಾತ್ರ) ಪ್ರಮಾಣ ಪತ್ರಗಳ ಸಂಖ್ಯೆ(ಆರ್.ಡಿ - - - - - - - - - - - - - -)

ಇ-ದೃಢೀಕರಿಸಿದ ದಾಖಲೆಗಳ ಸಂಖ್ಯೆಗಳು

ದಿವ್ಯಾಂಗ ವಿದ್ಯಾರ್ಥಿಯಾಗಿದ್ದಲ್ಲಿ ಭಾರತ ಸರ್ಕಾರದಿಂದ ನೀಡಿರುವ ಅಂಗವೈಕಲ್ಯ ಕಾರ್ಡ್ ಸಂಖ್ಯೆ

NEW ಆತ್ಮೀಯ ಅರ್ಜಿದಾರರೇ ಇ-ದೃಢೀಕರಣ ಅಧಿಕಾರಿಯ ಸಂಪರ್ಕ ವಿವರಗಳನ್ನು(ಇ-ದೃಢೀಕರಣ ಅಧಿಕಾರಿಯ ಹೆಸರು ಮತ್ತು ದೂರವಾಣಿ ಸಂಖ್ಯೆ) **"Verifier Contact"** ಮೆನು ಅಡಿಯಲ್ಲಿ ನೀಡಲಾಗಿದೆ, ನೀವು ಸಂಬಂಧಪಟ್ಟ ಇ-ದೃಢೀಕರಣ ಅಧಿಕಾರಿಯನ್ನು ಮೂಲ ದಾಖಲೆಗಳೊಂದಿಗೆ ಸಂಪರ್ಕಿಸಿ ಮತ್ತು ಬಾಕಿ ಇರುವ ದಾಖಲೆಗಳನ್ನು ಇ-ದೃಢೀಕರಣ ಮಾಡಿಸಿಕೊಳ್ಳುವುದು.

NEW **UniData** ದತ್ತಾಂಶದಲ್ಲಿ ನಿಮ್ಮ ಬೋನಾಫೈಡ್ ಮತ್ತು ಫಲಿತಾಂಶ ಮಾಹಿತಿಯ ಲಭ್ಯತೆಯನ್ನು ಪರಿಶೀಲಿಸಲು ಇಲ್ಲಿ ಕ್ಲಿಕ್ ಮಾಡಿ **(https://ssp.postmatric.karnataka.gov.in/2021_processing/Rpt_Check_Availability_Of_Bonafide_Marks_Data.aspx)**

PRINCIPAL
Shri Vrushabhendra Education Society's
B.R.Darur First Grade College,Harug...
Tq.Raibag - 591220. Dt.Belagavi

NEW ಯಾವುದೇ ಕೋರ್ಸ್ ನ ಮೊದಲನೇ ವರ್ಷದಲ್ಲಿ ಓದುತ್ತಿರುವ ವಿದ್ಯಾರ್ಥಿಗಳ ಪ್ರವೇಶಾತಿ ದತ್ತಾಂಶವನ್ನು ಇನ್ನೂ ಬಹಳಷ್ಟು ವಿಶ್ವವಿದ್ಯಾಲಯಗಳಿಂದ ಸ್ವೀಕರಿಸಬೇಕಾಗಿರುವುದರಿಂದ ವಿವಿಧ ಕೋರ್ಸ್‌ಗಳಲ್ಲಿ ಕಲಿಯುತ್ತಿರುವ ಎಲ್ಲಾ **1** ನೇ ವರ್ಷದ ವಿದ್ಯಾರ್ಥಿಗಳು ಎಸ್.ಎಸ್.ಪಿ ಮೂಲಕ ಅರ್ಜಿ ಸಲ್ಲಿಸಲು ವಿಶ್ವವಿದ್ಯಾಲಯಗಳ ಪ್ರವೇಶಾತಿ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ ಕಾಯುವಂತೆ ಕೋರಲಾಗಿದೆ. ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶ ಕೋಶದೊಂದಿಗೆ ಪ್ರವೇಶಾತಿ ದತ್ತಾಂಶವನ್ನು ಇನ್ನೂ ಹಂಚಿಕೊಳ್ಳದಿರುವ ವಿಶ್ವವಿದ್ಯಾಲಯಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು ವಿಸ್ತರಿಸಲಾಗುವುದು. ದಯವಿಟ್ಟು ಸಹಕರಿಸಿ.

NEW ವಿದ್ಯಾರ್ಥಿಗಳ ಬೋನಾಫೈಡ್ ಹಾಗೂ ಪರೀಕ್ಷಾ ಫಲಿತಾಂಶ ದತ್ತಾಂಶವನ್ನು ಇನ್ನೂ ಒದಗಿಸದ ವಿಶ್ವವಿದ್ಯಾಲಯಗಳ ಪಟ್ಟಿಯನ್ನು ವೀಕ್ಷಿಸಲು ಇಲ್ಲಿ ಕ್ಲಿಕ್ ಮಾಡಿ. **(check_university_nodata.aspx)**

NEW ನಿಮ್ಮ ಪ್ರವೇಶಾತಿ ಮಾಹಿತಿ ಅಥವಾ ಸಿ.ಇ.ಟಿ/ಎ.ಐ.ಕ್ಯೂ/ಸಿ.ಎ.ಸಿ ಕೌನ್ಸೆಲಿಂಗ್ ಮಾಹಿತಿಯ ಲಭ್ಯತೆಯನ್ನು ತಿಳಿಯಲು ಇಲ್ಲಿ ಕ್ಲಿಕ್ ಮಾಡಿ. **(check_adm_counsel.aspx)**

NEW ಆತ್ಮೀಯ ಅರ್ಜಿದಾರರೇ, ನಿಮ್ಮ ಬಳಿ ಜಾತಿ / ಆದಾಯ / ಇ.ಡಬ್ಲ್ಯು.ಎಸ್. ಆರ್.ಡಿ ಪ್ರಮಾಣಪತ್ರವಿಲ್ಲದಿದ್ದರೆ,ದಯವಿಟ್ಟು **Nadakacheri (https://nadakacheri.karnataka.gov.in/Online_service_Public/loginpage.aspx)** ಲಿಂಕ್ ಅನ್ನು ಕ್ಲಿಕ್ ಮಾಡುವ ಮೂಲಕ ಸದರಿ ಪ್ರಮಾಣಪತ್ರಗಳಿಗಾಗಿ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಿ ಹಾಗೂ ಸ್ವೀಕೃತಿ ಪ್ರತಿಯಲ್ಲಿ ಉಲ್ಲೇಖಿಸಲಾಗಿರುವ ಆರ್.ಡಿ ಸಂಖ್ಯೆಯನ್ನು ಎಸ್.ಎಸ್.ಪಿ ಯಲ್ಲಿ ಸಲ್ಲಿಸಿ ನಿಮ್ಮ ಖಾತೆ ಸೃಜನೆ ಪ್ರಕ್ರಿಯೆಯನ್ನು ಪೂರ್ಣಗೊಳಿಸಿ. ಅರ್ಜಿ ಸಲ್ಲಿಸಲು ಪ್ರಮಾಣಪತ್ರಗಳನ್ನು ನೀವು ಪಡೆಯುವವರೆಗೆ ಕಾಯಬೇಕಾಗಿಲ್ಲ.

## ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸುವ ಪ್ರಕ್ರಿಯೆ

- ನೋಂದಣಿ (ಒಮ್ಮೆ ಮಾತ್ರ) - ಈ ಹಿಂದಿನ ವರ್ಷದಲ್ಲಿ **SSP** ಮೂಲಕ ವಿದ್ಯಾರ್ಥಿವೇತನ ಪಡೆದಿದ್ದಲ್ಲಿ ನೋಂದಣಿ ಪ್ರಕ್ರಿಯೆ ಅಗತ್ಯವಿಲ್ಲ
- ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ ಲಾಗಿನ್ ಆಗಿ ಇ-ದೃಢೀಕರಣ ಹಂತದವರೆಗೆ ಅರ್ಜಿಯನ್ನು ಸಲ್ಲಿಸಬೇಕು
- ಕಾಲೇಜಿನ ಇ-ದೃಢೀಕರಣ ಅಧಿಕಾರಿಗಳಿಂದ ತಮ್ಮ ದಾಖಲೆಗಳನ್ನು ಇ-ದೃಢೀಕರಣ ಮಾಡಿ ಮತ್ತು ಇ-ದೃಢೀಕರಣ ಐಡಿಯನ್ನು ಪಡೆಯಬೇಕು
- ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ ಲಾಗಿನ್ ಆಗಿ ಇ-ದೃಢೀಕರಣ ಐಡಿಗಳನ್ನು ನಮೂದಿಸಿ ಮತ್ತು ಅರ್ಜಿ ಸಲ್ಲಿಕೆಯ ಪ್ರಕ್ರಿಯೆಯನ್ನು ಪೂರ್ಣಗೊಳಿಸಿ

ಪ್ರಿಯ ಅರ್ಜಿದಾರರೇ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನವನ್ನು ಪಡೆಯಲು ದಯವಿಟ್ಟು ನಿಮ್ಮ ಆಧಾರ್ ಸಂಖ್ಯೆಯನ್ನು ನಿಮ್ಮ ಬ್ಯಾಂಕ್ ಖಾತೆಗೆ ಜೋಡಣೆ ಮಾಡಿಸಿಕೊಳ್ಳಿ. ದಯವಿಟ್ಟು ಕೂಡಲೇ ನಿಮ್ಮ ಬ್ಯಾಂಕಿಗೆ ಭೇಟಿ ನೀಡಿ ನಿಮ್ಮ ಆಧಾರ್ ಅನ್ನು **NPCI** ಗೆ ಜೋಡಣೆ ಮಾಡಿಸಿ.

ಎಸ್‌ಸಿ, ಎಸ್‌ಟಿ, ಅಲ್ಪಸಂಖ್ಯಾತ, ಬ್ರಾಹ್ಮಣ **(EWS)**, ಹಿಂದುಳಿದ ವರ್ಗಗಳು, ರಕ್ಷಣಾ ಸಿಬ್ಬಂದಿಯ ಸಂಬಂಧಿ ಮತ್ತು ವಿಕಲಚೇತನ ವಿದ್ಯಾರ್ಥಿಗಳು ಈ ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಬೇಕು.

ಬ್ಯಾಂಕಿನೊಂದಿಗೆ ನಿಮ್ಮ ಆಧಾರ್ ಜೋಡಣೆಯನ್ನು ಪರಿಶೀಲಿಸಲು ಇಲ್ಲಿ ಕ್ಲಿಕ್ ಮಾಡಿ **(https://resident.uidai.gov.in/bank-mapper)**

ಇ-ದೃಢೀಕರಣ ಪೋರ್ಟಲ್ ಗಾಗಿ ಇಲ್ಲಿ ಕ್ಲಿಕ್ ಮಾಡಿ **(http://eattestation.ssp.karnataka.gov.in/)** (ವಿದ್ಯಾರ್ಥಿಗಳು)

ಇ-ದೃಢೀಕರಣ ಪೋರ್ಟಲ್ ಗಾಗಿ ಇಲ್ಲಿ ಕ್ಲಿಕ್ ಮಾಡಿ **(https://eattestation.ssp.karnataka.gov.in/esign)** (ಇ-ದೃಢೀಕರಣ ಅಧಿಕಾರಿಗಳು)

## ಯೋಜನೆಗಳು

ಸಮಾಜ ಕಲ್ಯಾಣ ಇಲಾಖೆ | ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ | ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ

ತಾಂತ್ರಿಕ ಶಿಕ್ಷಣ ಇಲಾಖೆ | ವೈದ್ಯಕೀಯ ಶಿಕ್ಷಣ ಇಲಾಖೆ | ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿ | ಆಯುಷ್ ಇಲಾಖೆ | ವಿಕಲಚೇತನರ ಕಲ್ಯಾಣ ಇಲಾಖೆ


ಕಾಲೇಜು ಶಿಕ್ಷಣ ಇಲಾಖೆ

**Post-Matric Scholarship for SC Students**

ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ

© 2019 ಇ-ಆಡಳಿತ ಕೇಂದ್ರ ಕರ್ನಾಟಕ ರಾಜ್ಯ ಸರ್ಕಾರ

PRINCIPAL
Shri Vrushabhendra Education Society's
B.R.Darur First Grade College,Harugeri
Tq.Raibag - 591220. Dt.Belagavi



ರೈತರ ಮಕ್ಕಳಿಗೆ ಉನ್ನತ ಶಿಕ್ಷಣ

# "ಮುಖ್ಯಮಂತ್ರಿ ರೈತ ವಿದ್ಯಾ ನಿಧಿ"

ರೈತರ ಮಕ್ಕಳ ಹೆಚ್ಚಿನ ಹಾಗೂ ಉನ್ನತ ಶಿಕ್ಷಣವನ್ನು ಪ್ರೋತ್ಸಾಹಿಸಲು ಹೊಸ ಶಿಷ್ಯವೇತನ "ಮುಖ್ಯಮಂತ್ರಿ ರೈತ ವಿದ್ಯಾ ನಿಧಿ" ಯೋಜನೆಯನ್ನು ಜಾರಿ ತರಲಾಗಿದೆ.

## ಯೋಜನೆಯ ರೂಪರೇಷೆಗಳು

ಎಸ್.ಎಸ್.ಎಲ್.ಸಿ ಅಥವಾ ಹತ್ತನೇ ತರಗತಿಯನ್ನು ಪೂರ್ಣಗೊಳಿಸಿದ ನಂತರ ಕರ್ನಾಟಕ ರಾಜ್ಯದ ಯಾವುದೇ ಭಾಗದಲ್ಲಿರುವ, ಅಧಿಕೃತವಾಗಿ ನೋಂದಣಿಯಾಗಿರುವ ಶಿಕ್ಷಣ ಸಂಸ್ಥೆಗಳು/ ವಿಶ್ವವಿದ್ಯಾಲಯಗಳಲ್ಲಿ ಸ್ನಾತಕೋತ್ತರ ಕೋರ್ಸಗಳವರೆಗೆ ಪ್ರವೇಶವನ್ನು ಪಡೆದಿರುವ ಕರ್ನಾಟಕ ರಾಜ್ಯದ ರೈತರ ಎಲ್ಲಾ ಮಕ್ಕಳ ಬ್ಯಾಂಕ್‌ಗಳ ಖಾತೆಗಳಿಗೆ ನೇರ ನಗದು ವರ್ಗಾವಣೆ (Direct Benefit Transfer-DBT) ಪದ್ಧತಿಯ ಮೂಲಕ 2021-22ನೇ ಆರ್ಥಿಕ ವರ್ಷದ ಸಾಲಿನಿಂದ ಜಾರಿಗೆ ಬರುವಂತೆ ಈ ಮುಂದಿನ ಪಟ್ಟಿಯಲ್ಲಿ ವಿವರಿಸಿರುವಂತೆ ಕೊಡಲಾಗುತ್ತದೆ. ಶಿಷ್ಯ ವೇತನದ ಹಣದ ಮೊತ್ತವನ್ನು ವಾರ್ಷಿಕ ಶಿಷ್ಯವೇತನ (Scholarship) ರೂಪದಲ್ಲಿ ಅವರ ಬ್ಯಾಂಕಗಳ ಖಾತೆಗಳಿಗೆ ನೇರ ನಗದು ವರ್ಗಾವಣೆ ಪದ್ಧತಿ ಮೂಲಕ ಒದಗಿಸಲಾಗುತ್ತದೆ.

| ಕ್ರ ಸಂ | ಕೋರ್ಸಿನ ಹೆಸರು/ಕೋರ್ಸಿನ ವಿಧಗಳು | ಹುಡುಗರು/ಪುರುಷರು | ಹುಡುಗಿಯರು/ ಅನ್ಯ ಲಿಂಗದವರು |
|---|---|---|---|
| 1. | ಪದವಿಯ ಮುಂಚೆ ಪಿ.ಯು.ಸಿ/ಐ.ಟಿ.ಐ/ ಡಿಪ್ಲೋಮಾ ಎಲ್ಲಾ ಬಿ.ಎ/ಬಿ.ಎಸ್.ಸಿ/ಬಿ.ಕಾಂ ಇತ್ಯಾದಿ | ರೂ. 2500/- | ರೂ. 3000/- |
| 2. | ಎಂ.ಬಿ.ಬಿ.ಎಸ್/ಬಿ.ಇ/ಬಿ.ಟೆಕ್ ಮತ್ತು ವೃತ್ತಿಪರ ಕೋರ್ಸಗಳನ್ನು ಹೊರತುಪಡಿಸಿ. | ರೂ. 5000/- | ರೂ. 5500/- |
| 3. | ಎಲ್.ಎಲ್.ಬಿ/ ಪ್ಯಾರ ಮೆಡಿಕಲ್/ ಬಿ.ಫಾರ್ಮ್/ ನರ್ಸಿಂಗ್, ಇತ್ಯಾದಿ ವೃತ್ತಿಪರ ಕೋರ್ಸಗಳು | ರೂ.7500/- | ರೂ.8000/- |
| 4. | ಎಂ.ಬಿ.ಬಿ.ಎಸ್ /ಬಿ.ಇ/ಬಿ.ಟೆಕ್. ಮತ್ತು ಎಲ್ಲಾ ಸ್ನಾತಕೋತ್ತರ ಕೋರ್ಸ್‌ಗಳು | ರೂ. 10,000/- | ರೂ.11,000/- |



## ಮುಖ್ಯಮಂತ್ರಿ ರೈತ ವಿದ್ಯಾ ನಿಧಿ ಶಿಷ್ಯ ವೇತನ ಪಡೆಯಲು ಕೆಳಕಂಡ ಷರತ್ತುಗಳನ್ನು ಒಳಗೊಂಡಿರುತ್ತದೆ

1) ರೈತರ ಮಕ್ಕಳು ಕರ್ನಾಟಕ ರಾಜ್ಯದ ಅನುದಾನದಿಂದ ಪಾವತಿಸುವಂತಹ ಒಂದು ಶಿಷ್ಯವೇತನಕ್ಕೆ ಮಾತ್ರ ಅರ್ಹರಾಗುತ್ತಾರೆ. ಆದರೆ ಮೆರಿಟ್, ಅರ್ಹತಾ ಪರೀಕ್ಷೆ, ಶೈಕ್ಷಣಿಕ ಪರೀಕ್ಷೆಗಳಲ್ಲಿ ರ‍್ಯಾಂಕ್ ಇತ್ಯಾದಿಗಳ ಆಧಾರದ ಮೇಲೆ ಪಡೆಯುವ ಶಿಷ್ಯವೇತನ / ಪ್ರಶಸ್ತಿ (award)/ ಪ್ರತಿಫಲ (reward) -ಇವುಗಳನ್ನು ರೈತರ ಮಕ್ಕಳು ಪಡೆದಿದ್ದರೂ, ಈ ಶಿಷ್ಯವೇತನವನ್ನು ಪಡೆಯಲು ಅರ್ಹರಾಗಿರುತ್ತಾರೆ.

2) ರೈತರ ಮಕ್ಕಳ ತಂದೆ/ತಾಯಿ ಇಬ್ಬರಲ್ಲಿ ಒಬ್ಬರ ಕೃಷಿ ಜಮೀನಿನ ಒಡೆಯರಾಗಿದ್ದರೆ ಈ ಯೋಜನೆಯಲ್ಲಿ ಅಂತಹ ರೈತರ ಮಕ್ಕಳು ಈ ಶಿಷ್ಯವೇತನಕ್ಕೆ ಅರ್ಹರಾಗಿರುತ್ತಾರೆ.

3) ಈ ಶಿಷ್ಯವೇತನವು ಶಿಕ್ಷಣದ ಯಾವುದೇ ಕೋರ್ಸಿನ ಸೆಮಿಸ್ಟರ್ / ಶೈಕ್ಷಣಿಕ ವರ್ಷಗಳಿಗೆ ಮಿತಿಯಾಗಿರತಕ್ಕದ್ದು. ಕೋರ್ಸಿನ ಸೆಮಿಸ್ಟರ್‌ನಲ್ಲಿ/ ಶೈಕ್ಷಣಿಕ ವರ್ಷದಲ್ಲಿ ಅನುತ್ತೀರ್ಣ ಹೊಂದಿ ಪುನ: ಆ ಸೆಮಿಸ್ಟರ್‌ನಲ್ಲಿ/ ಶೈಕ್ಷಣಿಕ ವರ್ಷದಲ್ಲಿ ವಿದ್ಯಾಭ್ಯಾಸದ ಪುನರಾವರ್ತನೆಯಾದರೆ (ಪುನ: ಪರೀಕ್ಷೆ ತೆಗೆದುಕೊಂಡರೆ) ವಿದ್ಯಾರ್ಥಿಗಳು ಶಿಷ್ಯವೇತನವನ್ನು ಪಡೆಯಲು ಅರ್ಹರಾಗಿರುವುದಿಲ್ಲ.


4) ಈ ಶಿಷ್ಯವೇತನವನ್ನು ಯಾವುದಾದರೂ ಒಂದು ವಿಧದ ಕೋರ್ಸಗೆ ನೀಡಲಾಗುವುದು. ಉದಾಹರಣೆಗೆ, "X ಎಂಬ ಸ್ನಾತಕೋತ್ತರ ಪದವಿಯನ್ನು ಪೂರೈಸಿದ ನಂತರ Y ಎಂಬ ಸ್ನಾತಕೋತ್ತರ ಕೋರ್ಸ್‌ಗೆ ವಿದ್ಯಾರ್ಥಿಯು ಪ್ರವೇಶ ಪಡೆದಲ್ಲಿ. ಈ ಕೋರ್ಸಗೆ ಶಿಷ್ಯವೇತನವನ್ನು ಪಡೆಯಲು ಅರ್ಹವಾಗುವುದಿಲ್ಲ.

ಜಾಲತಾಣ : https://ssp.postmatric.karnataka.gov.in/

**ಜಂಟಿ ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ಬೆಳಗಾವಿ**

PRINCIPAL
Shri Vrushabhendra Education Society's
S.R.Darur First Grade College,Harugeri
Tq. Raibag - 591220. Dt.Belagavi

# ಕೃಷಿ ಇಲಾಖೆ



ಶ್ರೀ ಬಸವರಾಜ ಎಸ್ ಬೊಮ್ಮಾಯಿ
ಸನ್ಮಾನ್ಯ ಮುಖ್ಯಮಂತ್ರಿಗಳು



## ರೈತರ ಮಕ್ಕಳಿಗೆ ಉನ್ನತ ಶಿಕ್ಷಣ

# ಮುಖ್ಯಮಂತ್ರಿ ರೈತ ವಿದ್ಯಾನಿಧಿ

**2021-22 ನೇ ಸಾಲಿನ ಶೈಕ್ಷಣಿಕ ವರ್ಷದ ಶಿಷ್ಯವೇತನ ನೋಂದಣಿಗಾಗಿ ಆಹ್ವಾನ**

**ಜಾಲತಾಣ https://ssp.postmatric.karnataka.gov.in/**

## ಅರ್ಜಿ ಸಲ್ಲಿಕೆ ಹಂತಗಳು

**1** ಮೊದಲನೇ ಹಂತ
ವಿದ್ಯಾರ್ಥಿಗಳ ಖಾತೆ ಸೃಜನೆ

**2** ಎರಡನೇ ಹಂತ ವಿದ್ಯಾರ್ಥಿಗಳ ವೈಯಕ್ತಿಕ ಹಾಗೂ ಶೈಕ್ಷಣಿಕ ವಿವರಗಳನ್ನು ದಾಖಲಿಸುವುದು.

21-22 ನೇ ಶೈಕ್ಷಣಿಕ ವರ್ಷದ ದಾಖಲಾತಿ ಪೂರ್ಣಗೊಂಡ ನಂತರ ಎರಡನೇ ಹಂತದಲ್ಲಿ ಮಾಹಿತಿ ನಮೂದು ಪ್ರಕ್ರಿಯೆ ಪೂರ್ಣಗೊಳಿಸುವುದು.




"ಮುಖ್ಯಮಂತ್ರಿ ರೈತ ವಿದ್ಯಾನಿಧಿ" ಕಾರ್ಯಕ್ರಮದಡಿ ನೀಡಲಾಗುವ ವಾರ್ಷಿಕ ಶಿಷ್ಯವೇತನದ ವಿವರ

| ಕ್ರ. ಸಂ | ಕೋರ್ಸ್‌ಗಳು | ವಿದ್ಯಾರ್ಥಿಗಳು / ಹುಡುಗರು | ವಿದ್ಯಾರ್ಥಿನಿಯರು / ಅನ್ಯಲಿಂಗದವರು |
|---|---|---|---|
| 1. | ಪಿ.ಯು.ಸಿ/ಐ.ಟಿ.ಐ/ ಡಿಪ್ಲೋಮಾ | ₹ 2500/- | ₹ 3000/- |
| 2. | ಬಿ.ಎ. / ಬಿ.ಎಸ್‌ಸಿ / ಬಿ.ಕಾಂ ಇನ್ನಿತರೆ ಪದವಿ ಕೋರ್ಸ್‌ಗಳು | ₹ 5000/- | ₹ 5500/- |
| 3. | ಎಲ್.ಎಲ್.ಬಿ/ ಪ್ಯಾರಾಮೆಡಿಕಲ್/ ಬಿ.ಫಾರ್ಮ್/ ನರ್ಸಿಂಗ್, ಇನ್ನಿತರೆ ವೃತ್ತಿಪರ ಕೋರ್ಸ್‌ಗಳು | ₹ 7500/- | ₹ 8000/- |
| 4. | ಎಂ.ಬಿ.ಬಿ.ಎಸ್ / ಬಿ.ಇ / ಬಿ.ಟೆಕ್. ಮತ್ತು ಎಲ್ಲಾ ಸ್ನಾತಕೋತ್ತರ ಕೋರ್ಸ್‌ಗಳು | ₹ 10,000/- | ₹ 11,000/- |

**ಅರ್ಹತೆ :**
- ವಿದ್ಯಾರ್ಥಿಯು ರೈತರ ಮಕ್ಕಳಾಗಿರಬೇಕು. ವಿದ್ಯಾರ್ಥಿಯ ತಂದೆ ಅಥವಾ ತಾಯಿಯು ರೈತರ ಗುರುತಿನ ಸಂಖ್ಯೆ (FID) ಹೊಂದಿರಬೇಕು.
- 2021-22ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಪ್ರವೇಶ ಹೊಂದಿರಬೇಕು.

ವಿಶೇಷ ಸೂಚನೆ : ಪುನರಾವರ್ತಿತ ವಿದ್ಯಾರ್ಥಿಗಳು (Repeaters) ಅರ್ಹರಿರುವುದಿಲ್ಲ.

PRINCIPAL
Shri Vrushabhendra Education Society's
S.B.Darur First Grade College,Harugeri
Tq.Raibag - 591220. Dt.Belagavi

ಹೆಚ್ಚಿನ ಮಾಹಿತಿಗಾಗಿ ಸಮೀಪದ ಸಹಾಯಕ ಕೃಷಿ ನಿರ್ದೇಶಕರ ಕಚೇರಿ / ರೈತ ಸಂಪರ್ಕ ಕೇಂದ್ರ / ಪದವಿ ಪೂರ್ವ ಹಾಗೂ ಡಿಗ್ರಿ ಕಾಲೇಜುಗಳನ್ನು ಸಂಪರ್ಕಿಸಿರಿ

**ಜಂಟಿ ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ಬೆಳಗಾವಿ**

**ಕರ್ನಾಟಕ ಸರ್ಕಾರ**

ಸಂಖ್ಯೆ:ಪಪೂಶಿಇ/ಸ್ಕೈರಾ./ಕೇ.ಮಾ.ಸಂ.ಅ.ಸ.ವಿ.ವೇ.2021.F.B./2021-22

ನಿರ್ದೇಶಕರ ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಕ್ರಾಸ್, ಸಂಪಿಗೆ ರಸ್ತೆ,
ಮಲ್ಲೇಶ್ವರಂ, ಬೆಂಗಳೂರು-12.
ದಿನಾಂಕ: -08-2021
05-09-2021

## ಪತ್ರಿಕಾ ಪ್ರಕಟಣೆ

ಕೇಂದ್ರ ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯ (M.H.R.D), ಉನ್ನತ ಶಿಕ್ಷಣ ಇಲಾಖೆ, ಕೇಂದ್ರ ಸರ್ಕಾರ, ನವದೆಹಲಿ ಇವರ ವತಿಯಿಂದ 2021ರಲ್ಲಿ ನಡೆದ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಸಂಯೋಜನೆವಾರು Top 20th Percentile or 80th Percentileಗಿಂತ ಹೆಚ್ಚು ಅಂಕಗಳಿಸಿದ ಹಾಗೂ ತಮ್ಮ ವಿದ್ಯಾಭ್ಯಾಸವನ್ನು ಕಡ್ಡಾಯವಾಗಿ ಉನ್ನತ ಶಿಕ್ಷಣದಲ್ಲಿ ಮುಂದುವರಿಸಿರುವಂತಹ(ಕನಿಷ್ಠ 03 ವರ್ಷದ ಪದವಿ ತರಗತಿಗೆ ದಾಖಲಾಗಿರುವ) ವಿದ್ಯಾರ್ಥಿಗಳಿಂದ Central Sector Scheme of Scholarship for College and University Studentsಗಳಿಗೆ online ಮೂಲಕ ಅರ್ಜಿ ಸಲ್ಲಿಸುವಂತೆ ಸೂಚಿಸಲಾಗಿರುತ್ತದೆ. ಈ ಸಂಬಂಧವಾಗಿ ಕೇಂದ್ರ ಸರ್ಕಾರದ ವತಿಯಿಂದ website:<u>www.scholarships.gov.in</u>ನ <u>National e-Scholarship Portal</u>ನಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ. ಆದಕಾರಣ, ಈ portalನಲ್ಲಿಯೇ <u>2021ರ Fresh Batchನ ವಿದ್ಯಾರ್ಥಿಗಳು ಅರ್ಜಿಗಳನ್ನು "online" ಮೂಲಕ ಸಲ್ಲಿಸಬೇಕಿರುತ್ತದೆ.</u> (Link for submission of application website:<u>www.scholarship.gov.in</u> =» New User(Register). ಪ್ರಸ್ತುತ ಸದರಿ ಪೋರ್ಟಲ್‌ನಲ್ಲಿ ಹೊಸ ಬ್ಯಾಚ್‌ನ ಕಾರ್ಯ ಜಾರಿಯಲ್ಲಿದ್ದು, ಶೀಘ್ರದಲ್ಲಿಯೆ ಪೂರ್ಣಗೊಳ್ಳಲಿರುತ್ತದೆ. ಆಸಕ್ತ ವಿದ್ಯಾರ್ಥಿಗಳು ಆಗಾಗ ಈ ವೆಬ್‌ಸೈಟನ್ನು ಗಮನಿಸುತ್ತಿದ್ದು, ಪ್ರಕ್ರಿಯೆ ಆರಂಭಗೊಂಡ ಕೂಡಲೇ ಕೇಂದ್ರ ಸರ್ಕಾರದ ವತಿಯಿಂದ ನಿಗದಿ ಪಡಿಸುವ ದಿನಾಂಕದೊಳಗಾಗಿ "<u>Online</u>" ಮೂಲಕ ಅರ್ಜಿಯನ್ನು ಸಲ್ಲಿಸಬಹುದಾಗಿರುತ್ತದೆ.

ಹಾಗೂ 2021ನೇ ಸಾಲಿನಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ (ಹೊಸ ಹಾಗೂ ನವೀಕರಣಗಳಿಗೆ) ಅರ್ಜಿ ಸಲ್ಲಿಸಲಿಚ್ಛಿಸುವ ವಿದ್ಯಾರ್ಥಿಗಳು ಕಡ್ಡಾಯವಾಗಿ ಆಧಾರ್ ನೋಂದಣಿ ಸಂಖ್ಯೆಯನ್ನು ಬ್ಯಾಂಕ್ ಖಾತೆಗೆ ಲಿಂಕ್ ಮಾಡಬೇಕಿರುತ್ತದೆ. ಆದಕಾರಣ, ಆಸಕ್ತ ವಿದ್ಯಾರ್ಥಿಗಳು ಆಧಾರ್ ನೊಂದಣಿ ಸಂಖ್ಯೆಯನ್ನು ಕಡ್ಡಾಯವಾಗಿ ಹೊಂದಿರಬೇಕಾಗಿ ಈ ಮೂಲಕ ತಿಳಿಸಿದೆ.

ವಿದ್ಯಾರ್ಥಿಗಳು <u>"online" ಮೂಲಕ</u> ಸಲ್ಲಿಸಿದ ಎಲ್ಲಾ ದಾಖಲೆಗಳನ್ನು (ಮೂಲ ದಾಖಲೆಗಳ ಜೊತೆಯಲ್ಲಿ) ಪರಿಶೀಲನೆಗಾಗಿ ತಾವು ಅಧ್ಯಯನ ಮಾಡುತ್ತಿರುವ ಕಾಲೇಜುಗಳ ಪ್ರಾಚಾರ್ಯರುಗಳಿಗೆ ಕೇಂದ್ರ ಸರ್ಕಾರದಿಂದ ನಿಗದಿ ಪಡಿಸುವ ದಿನಾಂಕದೊಳಗಾಗಿ ಸಲ್ಲಿಸುವುದು.

ಪ್ರಾಚಾರ್ಯರುಗಳು, ವಿದ್ಯಾರ್ಥಿಗಳು "<u>online</u>" ಮೂಲಕ ಸಲ್ಲಿಸಿರುವ ಅರ್ಜಿಗಳನ್ನು "<u>online</u>"ನಲ್ಲಿ ಕೂಲಂಕುಷವಾಗಿ ಪರಿಶೀಲಿಸಿ, ಸದರಿ ವಿದ್ಯಾರ್ಥಿಯು ತಮ್ಮ ಕಾಲೇಜಿನಲ್ಲಿ ದಾಖಲಾಗಿ, ವಿದ್ಯಾಭ್ಯಾಸ ಮುಂದುವರಿಸಿರುವ ಬಗ್ಗೆ ಹಾಗೂ ವಿದ್ಯಾರ್ಥಿಯು ವಿದ್ಯಾರ್ಥಿ ವೇತನದ ಉದ್ದೇಶಕ್ಕಾಗಿ ಖಾತೆ ತೆರೆದಿರುವ ಬ್ಯಾಂಕ್‌ನ ವಿವರಗಳನ್ನು ಪರಿಶೀಲಿಸಿ ಖಚಿತ ಪಡಿಸಿಕೊಂಡು, ಸದರಿ ಮಾಹಿತಿಯನ್ನು <u>"online" ಮೂಲಕವೇ ಕೇಂದ್ರ ಸರ್ಕಾರದ ವತಿಯಿಂದ ನಿಗದಿ ಪಡಿಸುವ ದಿನಾಂಕ: 30/11/2021ರೊಳಗೆ ಇಲಾಖೆಗೆ ಸಲ್ಲಿಸಲು( Forward ಮಾಡಲು)</u> ಕೋರಿದೆ. ಯಾವುದೇ ಕಾರಣಕ್ಕೂ ನೈಜ ವಿದ್ಯಾರ್ಥಿಯ ಹೊರತು ಆಯ್ಕೆಯಾಗದ ವಿದ್ಯಾರ್ಥಿಗೆ ವಿದ್ಯಾರ್ಥಿ ವೇತನ ಜಮೆಯಾಗದಂತೆ ನೋಡಿಕೊಳ್ಳುವ ಜವಾಬ್ದಾರಿ ಪ್ರಾಚಾರ್ಯರದ್ದಾಗಿರುತ್ತದೆ. ಈ ಸಂಬಂಧ ಹೆಚ್ಚಿನ ಮಾಹಿತಿಗೆ ಕೇಂದ್ರ ಕಛೇರಿಯ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನದ ಶಾಖೆಯನ್ನು ಸಂಪರ್ಕಿಸಲು ಕೋರಿದೆ. ಪ್ರಸ್ತುತ National e-Scholarship Portalನಲ್ಲಿ ವಿದ್ಯಾರ್ಥಿ ವೇತನದ ನಿಮಿತ್ತ ಕಾರ್ಯ ನಡೆಯುತ್ತಿರುವ ಕಾರಣ ಹೆಚ್ಚಿನ ಮಾಹಿತಿಯು ಲಭ್ಯವಿರುವುದಿಲ್ಲ. ಪ್ರಕ್ರಿಯೆ ಚಾಲನೆಗೊಂಡ ಕೂಡಲೇ ಸದರಿ ವಿದ್ಯಾರ್ಥಿ ವೇತನದ ಕುರಿತು ಹೆಚ್ಚಿನ ಮಾಹಿತಿ ಲಭ್ಯವಾದಲ್ಲಿ ಇಲಾಖಾ ಅಂತರ್ಜಾಲದಲ್ಲಿ ಆಳವಡಿಸಲಾಗುವುದು.

ಪದವಿ ಪೂರ್ವ ಶಿಕ್ಷಣ ಇಲಾಖೆಯ Website: <u>http://puc.kar.nic.in</u> =» Scholarship =» MHRD Scholarship =» MHRD Scholarship 2021-Fresh batchನಿಂದ ಮಾಹಿತಿಯನ್ನು ಪಡೆದುಕೊಳ್ಳಬಹುದು.

PRINCIPAL
Shri Vrushabhendra Education Society's
B.R.Darur First Grade College,Harugeri
Tq.Raibag - 591220. Dt.Belagavi

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.